# ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ

# ಸಿ ಸಿ - 45/2025

ದಿನಾಂಕಃ 10.03.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

| | | |
|---|---|---|
| ಹೆಸರು | : | ದಿಲೀಪ್ ರಾಜ್ ಪಟೇಲ್ |
| ತಂದೆಯ ಹೆಸರು | : | ಹನುಮಂತ ರಾಜ್ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ಚಳ್ಳಕೆರೆ |

## ಮುಖ್ಯ ವಿಚಾರಣೆ ಸ.ಸ.ಅ ರವರಿಂದಃ

ಚಾ.ಸಾ 4 ಮತ್ತು 5 ರವರ ಪರಿಚಯ ನನಗೆ ಇರುತ್ತದೆ.

ನನಗೆ ನ್ಯಾಯಾಲಯದಲ್ಲಿ ಒಂದು ದಾಖಲೆಯನ್ನು ತೋರಿಸಿದ್ದು ಅದು ದೂರು ಆಗಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸದರಿ ದೂರನ್ನು ನಿ.ಪಿ 1 ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 1-ಎ ಎಂದು ಗುರುತಿಸಲಾಯಿತು. ನನಗೆ ನ್ಯಾಯಾಲಯದಲ್ಲಿ ಮತ್ತೊಂದು ದಾಖಲೆಯನ್ನು ತೋರಿಸಿದ್ದು ಅದು ಕೃತ್ಯಸ್ಥಳ ಮತ್ತು ಜಪ್ತು ಪಂಚನಾಮೆಯಾಗಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸದರಿ ಕೃತ್ಯಸ್ಥಳ ಮತ್ತು ಜಪ್ತು ಪಂಚನಾಮೆಯನ್ನು ನಿ.ಪಿ 2 ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 2-ಎ ಎಂದು ಗುರುತಿಸಲಾಯಿತು. ನನಗೆ ನ್ಯಾಯಾಲಯದಲ್ಲಿ ಮತ್ತೊಂದು ದಾಖಲೆಯನ್ನು ತೋರಿಸಿದ್ದು ಅದು ಕಚ್ಚಾ ನಕಾಶೆಯಾಗಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸದರಿ ಕಚ್ಚಾ ನಕಾಶೆಯನ್ನು ನಿ.ಪಿ 3 ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 3-ಎ ಎಂದು ಗುರುತಿಸಲಾಯಿತು. ಆ ಕಾಲಕ್ಕೆ ಒಂದು ಭಾವಚಿತ್ರ ತೆಗೆದಿದ್ದು ಅದನ್ನು ನಿ.ಪಿ 4 ಎಂದು, ಅದಕ್ಕೆ ಸಂಬಂಧಿಸಿದ ಸಿಡಿ ಯನ್ನು ನಿ.ಪಿ 5 ಎಂದು ಗುರುತಿಸಲಾಯಿತು.

ನಿ.ಪಿ 1 ರಿಂದ 3 ಕ್ಕೆ ನನ್ನ ಸಹಿಯನ್ನು ಪೊಲೀಸರು ಯಾವ ಕಾರಣಕ್ಕಾಗಿ ಪಡೆದಿರುತ್ತಾರೆಂದು ನನಗೆ ಗೊತ್ತಿಲ್ಲ. ನಿ.ಪಿ 1 ರಿಂದ 3 ರಲ್ಲಿ ಏನು ಬರೆಯಲಾಗಿದೆ

ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಯಾವ ಕಾರಣಕ್ಕೆ ಭಾವಚಿತ್ರ ತೆಗೆಯಲಾಗಿದೆ ಎಂದು ನನಗೆ ಗೊತ್ತಿರುವುದಿಲ್ಲ.

(ಸ.ಸ.ಅ ರವರ ಕೋರಿಕೆಯಂತೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಲಾಯಿತು ಹಾಗೂ ಸ.ಸ.ಅ ರವರ ಕೋರಿಕೆಯಂತೆ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲು ಸ.ಸ.ಅ ರವರಿಂದಃ</u>**

ನಿ.ಪಿ 1 ರಂತೆ ಪೊಲೀಸರ ಮುಂದೆ ದೂರನ್ನು ನೀಡಿರುತ್ತೇನೆ ಎಂದರೆ ಸರಿ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳ ಬಗ್ಗೆ ನನಗೆ ಸಂಪೂರ್ಣವಾದ ಮಾಹಿತಿ ಇದೆ ಎಂದರೆ ಸರಿಯಲ್ಲ. ನಿ.ಪಿ 2 ರಿಂದ 4 ರಂತೆ ನನ್ನ ಸಮಕ್ಷಮ ಘಟನಾಸ್ಥಳ ಪಂಚನಾಮೆ ಮಾಡಿ ಕಚ್ಚಾ ನಕಾಶೆ ತಯಾರಿಸಿ ಭಾವಚಿತ್ರ ತೆಗೆಯಲಾಗಿದೆ ಎಂದರೆ ಸರಿಯಲ್ಲ. ಆ ಕಾಲಕ್ಕೆ ಒಂದು ಕಲ್ಲು ಮತ್ತು ಕಟ್ಟಿಗೆಯನ್ನು ಅಮಾನತ್ತುಪಡಿಸಿಕೊಳ್ಳಲಾಗಿದೆ ಎಂದರೆ ಸರಿಯಲ್ಲ. ಆರೋಪಿತರು ಮತ್ತು ನಾವು ಸಂಬಂಧಿಕರು ಆಗಿದ್ದು ಪ್ರಕರಣವನ್ನು ನ್ಯಾಯಾಲಯದ ಹೊರಗೆ ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ಆ ಕಾರಣಕ್ಕಾಗಿ ನಿ.ಪಿ 1 ರಿಂದ 5 ರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದರು ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿತರ ಪರ ವಕೀಲರಿಂದ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

**ಓ,ಹೇ,ಕೇ,ಸರಿ ಇದೆ,**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**